# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 48 | Pages. 2 | Date: 18-01-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 48 – ಪುಟಗಳು : 2 | 18-01-2026 | ಭಾನುವಾರ | Ph: 8762954248 | ದರ : ₹1


# ಕೈ ಜಾರಿದ ಅರಸೀಕೆರೆಯನ್ನು ಮರಳಿ ಗೆಲ್ಲುತ್ತೇವೆ

## ನಮಗೆ ಟೋಪಿ ಹಾಕಿದವನು ಈಗ ಸಿದ್ದರಾಮಯ್ಯ ಅವರಿಗೆ ಟೋಪಿ ಹಾಕಲು ಕಾಯುತ್ತಿದ್ದಾನೆ: ಹೆಚ್.ಡಿ ರೇವಣ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ರಾಜಕೀಯವಾಗಿ ನಾನು ಮತ್ತು ನಮ್ಮ ಕುಟುಂಬ ಬೆಳೆಯಲು ಅರಸೀಕೆರೆ ವಿಧಾನಸಭಾ ಕ್ಷೇತ್ರದ ಜನತೆಯ ಋಣ ಅಪಾರವಾಗಿದೆ.

ಆದರೆ ಒಬ್ಬನನ್ನು ಉಳಿಸಿಕೊಳ್ಳಲು ಒಂದು ಸಮಾಜಕ್ಕೆ ಅನ್ಯಾಯ ಮಾಡಿದ ಪಾಪಪ್ರಜ್ಞೆ ನನ್ನನ್ನು ಕಾಡುತ್ತಿದೆ ಎಂದು ಮಾಜಿ ಸಚಿವ ಎಚ್.ಡಿ.ರೇವಣ್ಣ ಬೇಸರ ಹೊರ ಹಾಕಿದರು.

ನಗರದ ಬಂಜಾರ ಸೇವಾಲಾಲ್ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ತಾಲೂಕಿನಲ್ಲಿ ವೀರಶೈವ ಸಮಾಜ ದೊಡ್ಡ ಸಂಖ್ಯೆಯಲ್ಲಿದ್ದರೂ, ಹಿರಿಯರ ಮಾತು ಕೇಳದೆ ಈ ಮನುಷ್ಯನಿಗೆ ವಿಧಾನಸಭೆ ಚುನಾವಣೆಯಲ್ಲಿ ಪಕ್ಷದ ಬಿ ಫಾರಂ ನೀಡಿ ಕಾರ್ಯಕರ್ತರು ಮತ್ತು ಮುಖಂಡರ ಸಹಕಾರದಿಂದ ಗೆಲ್ಲಿಸಿಕೊಂಡಿದ್ದೆ.

ಆದರೆ ಈ ಗಿರಾಕಿ ನಮಗೆ ಟೋಪಿ, ಈಗ ಸಿದ್ದರಾಮಯ್ಯ ಅವರಿಗೆ ಟೋಪಿ ಹಾಕಲು ಕಾಯುತ್ತಿದ್ದಾರೆ ಎಂದು ಶಾಸಕ ಶಿವಲಿಂಗೇಗೌಡರ ಅವರ ಹೆಸರು



ಹೇಳದೆಯೇ ಲೇವಡಿ ಮಾಡಿದರು.

ಅಭಿವೃದ್ಧಿ ಎಂದರೆ ಇವರ ಕುಟುಂಬ ಸದಸ್ಯರ ಹೆಸರಿನಲ್ಲಿ ನಡೆಸುತ್ತಿರುವ ಕ್ರಷರ್, ಜಲ್ಲಿಕಲ್ಲು, ಇಟ್ಟಿಗೆ ಸಿಮೆಂಟ್ ವ್ಯಾಪಾರ ಮಾಡುವ ವರ್ಕ್‌ಶಾಪ್ ಇಟ್ಟುಕೊಂಡು ಇವರೊಬ್ಬರು ಅಭಿವೃದ್ಧಿಯಾಗುತ್ತಿದ್ದಾರೆಯೇ ವಿನಃ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಣುತ್ತಿಲ್ಲ ಎಂದು ಕಿಡಿ ಕಾರಿದರು. ದೇವೇಗೌಡರ ಮುಂದೆಯೇ ನಿಮ್ಮ ಮುಖ ನೋಡಿ ವೋಟು ಹಾಕುವುದಿಲ್ಲ, ಹಣ ಕೊಟ್ಟರೆ ಮಾತ್ರ ಓಟು ಬೀಳುವುದು ಎಂದು ಅರಸೀಕೆರೆ ಜನತೆಯನ್ನು ದುಡ್ಡಿಗೆ ಅಳೆದ ಮಹಾನುಭಾವರು ಇವರು ಎಂದು ಜಾಡಿಸಿದರು.

ಅರಸೀಕೆರೆ ಕ್ಷೇತ್ರದ ಅಭಿವೃದ್ಧಿಗೆ ನನ್ನ, ಕುಮಾರಸ್ವಾಮಿ ಹಾಗೂ ದೇವೇಗೌಡರ ಸಹಕಾರ ಅವರು ಪಡೆಯಲಿಲ್ಲವೇ ಎಂದು ಜೇನುಕಲ್ ಸಿದ್ದೇಶ್ವರಸ್ವಾಮಿ ಮುಂದೆ ಬಂದು ಹೇಳಲಿ ಎಂದು ಸವಾಲು ಹಾಕಿದರು.

ಕೈ ಜಾರಿರುವ ಅರಸೀಕೆರೆ ಕ್ಷೇತ್ರವನ್ನು ಮತ್ತೆ ನಮ್ಮ ಎಲ್ಲ ಮುಖಂಡರು ಹಾಗೂ ಕಾರ್ಯಕರ್ತರು ಒಗ್ಗೂಡಿ, ಅರಸೀಕೆರೆಯಲ್ಲಿ ಮತ್ತೆ ಜೆಡಿಎಸ್ ಅಭ್ಯರ್ಥಿ ಗೆಲ್ಲಿಸಿಕೊಳ್ಳುವುದರಲ್ಲಿ ಸಂದೇಶವಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪರಾಜಿತ ಅಭ್ಯರ್ಥಿ ಎನ್.ಆರ್.ಸಂತೋಷ್ ಮಾತನಾಡಿ, ರಾಜ್ಯದಲ್ಲಿ ಯಾವುದೇ ಸರ್ಕಾರ ಅಧಿಕಾರಿದಲ್ಲಿರಲಿ, ಹಾಸನದಲ್ಲಿ ರೇವಣ್ಣ ಅವರದೇ ಸರ್ಕಾರ, ರೇವಣ್ಣ

> ಶಿವಲಿಂಗೇಗೌಡರು, ಅರಸೀಕೆರೆಯಲ್ಲಿ ಗೆಲ್ಲುವ ಮೊದಲು ಇಲ್ಲಿ ಜೆಡಿಎಸ್ ಗೆಲುವು ಸಾಧಿಸಿದೆ. ಪಕ್ಷಕ್ಕೆ ಅಂದು, ಇಂದು, ಮುಂದು ಎಂದೆಂದೂ ಭದ್ರ ಬುನಾದಿ ಇದ್ದು, ದೇವೇಗೌಡರ ಆಶೀರ್ವಾದ, ರೇವಣ್ಣ ಅವರ ಮಾರ್ಗದರ್ಶನದಲ್ಲಿ ಮುಖಂಡರು ತಮ್ಮ ಭಿನ್ನಾಭಿಪ್ರಾಯ ಬಿಟ್ಟು ಸಂಘಟನಾತ್ಮಕವಾಗಿ ನಾವೆಲ್ಲ ಹೋರಾಟ ನಡೆಸಿದರೆ 2028ರ ಚುನಾವಣೆಯಲ್ಲಿ ಜೆಡಿಎಸ್ ಕ್ಷೇತ್ರದಲ್ಲಿ ಗೆಲ್ಲುವುದರಲ್ಲಿ ಯಾವುದೇ ಸಂದೇಹವಿಲ್ಲ.
>
> **– ಜಿ.ಎಸ್.ಪರಮೇಶ್ವರಪ್ಪ, ಮಾಜಿ ಶಾಸಕರು**

ಅವರಿಂದ ಸಹಕಾರ ಪಡೆದು ಶಾಸಕರಾದ ಶಿವಲಿಂಗೇಗೌಡರು ಭಸ್ಮಾಸುರರಿದ್ದಂತೆ, ವರ ಪಡೆದ ಬಳಿಕ ಶಿವನಿಗೆ ತಿರುಗಿಬಿದ್ದ ಭಸ್ಮಾಸುರನಂತೆ ಶಿವಲಿಂಗೇಗೌಡರು ತಮ್ಮನ್ನು ರಾಜಕೀಯವಾಗಿ ಬೆಳೆಸಿದ ರೇವಣ್ಣ ಅವರ ಕುಟುಂಬದ ವಿರುದ್ಧ ತಿರುಗಿ ಬೀಳುವ ಮೂಲಕ ಕೃತಜ್ಞತಾ ಮನೋಭಾವ ಇಲ್ಲದಂತೆ ನಡೆದುಕೊಳ್ಳುತ್ತಿರುವುದು ಸರಿಯಲ್ಲ ಎಂದು ದೂರಿದ ಅವರು ಅಭಿವೃದ್ಧಿ ಎಂದರೆ ಕಾಂಕ್ರಿಟ್ ರಸ್ತೆಯಲ್ಲ, ತಾಲೂಕಿನ ಮಕ್ಕಳು ಸರ್ಕಾರಿ ಹುದ್ದೆಗಳಲ್ಲಿ ಸೇವೆ ಸಲ್ಲಿಸುವ ವಾತಾವರಣ ನಿರ್ಮಿಸಿಕೊಡುವುದು ಅಭಿವೃದ್ಧಿ ಎನಿಸಿಕೊಳ್ಳುತ್ತದೆ. ಈ ನಿಟ್ಟಿನಲ್ಲಿ ಶಾಸಕರು ತಮ್ಮ ಚಿಂತನೆ ಬದಲಿಸಿಕೊಳ್ಳಲಿ, ಇಲ್ಲದಿದ್ದರೆ ಮುಂದಿನ ಚುನಾವಣೆಯಲ್ಲಿ ಜನರೇ ಬದಲಿಸುತ್ತಾರೆ ಎಂದು ಎಚ್ಚರಿಸಿದರು.

ಜೆಡಿಎಸ್ ಮುಖಂಡರಾದ ಬಾಣಾವರ ಅಶೋಕ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಶೇಖರಪ್ಪ, ಹೊಸೂರು ಗಂಗಾಧರ್, ಜಿಪಂ ಮಾಜಿ ಉಪಾಧ್ಯಕ್ಷ ಬಂಡಿಗೌಡ್ರ ರಾಜಣ್ಣ ಮಾತನಾಡಿದರು.

ವೇದಿಕೆಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್, ವಿವೇಕ ಲಾಯರ್, ಕರ್ನಾಟಕ ಕುರುಬರ ಸಂಘದ ರಾಜ್ಯ ಉಪಾಧ್ಯಕ್ಷ ಕೆಂಕೆರೆ ಕೇಶವಮೂರ್ತಿ, ನಗರಸಭೆ ಮಾಜಿ ಅಧ್ಯಕ್ಷ ಗಿರೀಶ್, ತಾ.ಜೆಡಿಎಸ್ ಅಧ್ಯಕ್ಷ ಚಂದ್ರಶೇಖರ್, ಮುಖಂಡ ವೇಣು, ಲಾಳನಕೆರೆ ಯೋಗೇಶ್ ಮೊದಲಾದವರಿದ್ದರು.

# ಹತ್ತನೇ ತರಗತಿ ಪರೀಕ್ಷೆ ಸಿದ್ಧತೆ

**ಮಕ್ಕಳಿಕೆ ಆತ್ಮವಿಶ್ವಾಸ ತುಂಬಲು ಜ.20 ರಂದು ಶಿಬಿರ: ಗಂಗಾಧರ್**



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಹಾಗೂ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ವತಿಯಿಂದ ಎಸ್.ಎಸ್.ಎಲ್.ಸಿ.ವಿದ್ಯಾರ್ಥಿಗಳು ಮುಂಬರುವ ವಾರ್ಷಿಕ ಪರೀಕ್ಷೆ ಎದುರಿಸುವ ಕುರಿತು ಪರೀಕ್ಷಾ ಸಿದ್ಧತೆ ಮತ್ತು ಆತ್ಮವಿಶ್ವಾಸ HOW TO FACE EXAM ಎಂಬ ಶಿಬಿರವನ್ನು ಜ.20 ರಂದು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಹಾಗೂ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಅಧ್ಯಕ್ಷ ಟೈಮ್ಸ್ ಗಂಗಾಧರ್ ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಮಂಗಳವಾರ ಬೆಳಿಗ್ಗೆ 10 ಗಂಟೆಗೆ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ನಡೆಯುವ ಶಿಬಿರಕ್ಕೆ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಉದ್ಘಾಟಿಸುವರು ಎಂದರು.

ಶಿಬಿರಕ್ಕೆ ಹಾಸನ ನಗರದಲ್ಲಿರುವ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಭಾಗವಹಿಸಲಿದ್ದು, ಶಿಕ್ಷಣ ತಜ್ಞ ಎ.ಎಚ್. ಸಾಗರ್ ಅವರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವರು ಎಂದು ವಿವರಿಸಿದರು.

ಮುಖ್ಯ ಅತಿಥಿಗಳಾಗಿ ರೋಟರಿ ಜಿಲ್ಲಾ ಗವರ್ನರ್ ರೊ.ಪಾಲಾಕ್ಷ ಕೆ, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಬಲರಾಮ್ ಕೆ.ಎನ್., ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ರಂಗನಾಥ್, ರೋಟರಿ ಜೋನ್ 9ರ ಸಹಾಯಕ ಗವರ್ನರ್ ಮಂಜುನಾಥ್ ಜೆ.ಎನ್., ವಲಯ ಸೇನಾನಿಗಳಾದ ಮಮತಾ ಪಾಟೀಲ್, ಕಾರ್ಯಕ್ರಮ ಮುಖ್ಯಸ್ಥ ಯೋಗೇಶ್ ಎಸ್., ರೋಟರಿ ಕ್ಲಬ್ ಹಾಸನ ರಾಯಲ್‌ನ ಅಧ್ಯಕ್ಷ ಟೈಮ್ಸ್ ಗಂಗಾಧರ್ ಬಿ.ಕೆ., ಕಾರ್ಯದರ್ಶಿ ರವಿ ಕುಮಾರ್ ಪಿ.ಹಾಗೂ ಖಜಾಂಚಿ ದಿಲೀಪ್ ಕುಮಾರ್ ಎಚ್.ಕೆ. ಅವರು ಭಾಗವಹಿಸುವರು.

# ಸಕಲೇಶಪುರ: ಮೂಲ ಕಾಂಗ್ರೆಸ್ಸಿಗರು ಗರಂ!



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಾಂಗ್ರೆಸ್ ಮುಖಂಡ ಡಿ.ಸಿ ಸಣ್ಣಸ್ವಾಮಿ ಮೇಲೆ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ನಡೆಸಿರುವ ದಬ್ಬಾಳಿಕೆ ಅತ್ಯಂತ ಖಂಡನೀಯ ಎಂದು ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಹಾನುಬಾಳ್ ಭಾಸ್ಕರ್ ಹೇಳಿದರು.

ತಾಲೂಕಿನ ಬಾಗೆ ಗ್ರಾಮದ ಖಾಸಗಿ ಹೋಟೆಲ್ ಮೊಂದರಲ್ಲಿ ನಡೆದ ಮೂಲ ಕಾಂಗ್ರೆಸ್ಸಿಗರ ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿ ಜನಪ್ರಿಯ ಕಂದಾಯ ಸಚಿವರಾದ ಕೃಷ್ಣ ಬೈರೇಗೌಡರು ಸಕಲೇಶಪುರಕ್ಕೆ ಭೇಟಿ ನೀಡಿ ಸಾರ್ವಜನಿಕರ ಕುಂದುಕೊರತೆಗಳ ಸಭೆ ನಡೆಸಿದ್ದು, ಈ ಸಂದರ್ಭದಲ್ಲಿ ಸುಮಾರು 1050ಕ್ಕೂ ಹೆಚ್ಚು ಪ್ರಕರಣಗಳನ್ನು ಸ್ವಯಂವಾಗಿ ಆಲಿಸಿದ್ದಾರೆ. ಬಹುತೇಕ ಸಮಸ್ಯೆಗಳಿಗೆ ತಕ್ಷಣವೇ ಪರಿಹಾರ ಕಲ್ಪಿಸುವ ಉದ್ದೇಶದಿಂದ ತಹಸೀಲ್ದಾರ್, ಸಹಾಯಕ ಆಯುಕ್ತರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿರುವುದು ಶ್ಲಾಘನೀಯ ಕಾರ್ಯವಾಗಿದೆ. ಜನಸಾಮಾನ್ಯರ ಬಳಿಗೆ ನೇರವಾಗಿ ಬಂದು ಅವರ ಸಮಸ್ಯೆಗಳನ್ನು ಆಲಿಸುವುದು ವಿರಳವಾಗಿದ್ದು, ಈ ರೀತಿಯ ಜನಪರ ಆಡಳಿತಾತ್ಮಕ ಕ್ರಮ ಕೈಗೊಂಡಿರುವ ಕಂದಾಯ ಸಚಿವರ ನಡೆಗೆ ನಾವು ಹರ್ಷ ವ್ಯಕ್ತಪಡಿಸುತ್ತೇವೆ. ಇದು ಉಸ್ತುವಾರಿ ಸಚಿವರಾಗಿ ಅವರು ತೋರಿದ ಜವಾಬ್ದಾರಿಯುತ ಹಾಗೂ ಜನಪರ ಮನೋಭಾವಕ್ಕೆ ಸಾಕ್ಷಿಯಾಗಿದೆ. ಆದರೆ ಅದೇ ದಿನ ಸಂಜೆ ಅಧಿಕಾರಿಗಳ ಸಭೆ ನಡೆಯುವ ಸಂದರ್ಭದಲ್ಲಿ ಒಂದು ಅಹಿತಕರ ಘಟನೆ ಸಂಭವಿಸಿರುವುದು ದುಃಖಕರವಾಗಿದೆ. ಸಚಿವರೊಂದಿಗೆ ಮಾತನಾಡಲು ಮುಂದಾಗಿದ್ದ ಕಾಂಗ್ರೆಸ್ ಮುಖಂಡರಾದ ಡಿ.ಸಿ. ಸಣ್ಣಸ್ವಾಮಿ ಅವರು ಸಭಾಂಗಣ ಪ್ರವೇಶಿಸುವ ವೇಳೆ, ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಮುರಳಿ ಮೋಹನ್ ಎಂಬವರು ಅವಾಚ್ಯವಾಗಿ ವರ್ತಿಸಿ, ಮ್ಯಾನ್ ಹ್ಯಾಂಡ್ಲಿಂಗ್ ಮಾಡಿ ಹೊರಗೆ ತಳ್ಳಿದ ಘಟನೆ ಖಂಡನೀಯವಾಗಿದೆ. ಇದಕ್ಕೆ ಕೆಲವು ಅಧಿಕಾರಿಗಳ ಸಹಕಾರವೂ ಇದ್ದದ್ದು ಮತ್ತಷ್ಟು ಆತಂಕಕ್ಕೆ ಕಾರಣವಾಗಿದೆ. ಶಾಂತಿ, ಸೌಹಾರ್ದತೆಗೆ ಹೆಸರಾದ ಮಲೆನಾಡಿನ ಸಕಲೇಶಪುರದಲ್ಲಿ ಇಂತಹ ಘಟನೆಗಳು ನಡೆಯಬಾರದು. ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ಸಹ ಪರಸ್ಪರ ಗೌರವ ಮತ್ತು ಸಂಯಮ ಕಾಪಾಡುವುದು ಅತ್ಯಂತ ಅಗತ್ಯ. ಇಂತಹ ವರ್ತನೆಗಳು ಪಕ್ಷ ಸಂಘಟನೆಗೆ ಮತ್ತು ಸಾರ್ವಜನಿಕ ಜೀವನಕ್ಕೆ ಧಕ್ಕೆ ತರುತ್ತವೆ. ಈ ಹಿನ್ನೆಲೆಯಲ್ಲಿ, ಈ ಘಟನೆಯನ್ನು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ತೀವ್ರವಾಗಿ ಖಂಡಿಸುತ್ತಿದ್ದು, ಈ ವಿಷಯವನ್ನು ಪಕ್ಷದ ಹಿರಿಯ ನಾಯಕರ ಗಮನಕ್ಕೆ ತರಲಾಗುವುದು ಎಂದರು.

ಕೆಪಿಸಿಸಿ ಸದಸ್ಯ ಯಡೇಹಳ್ಳಿ ಮಂಜುನಾಥ್ ಮಾತನಾಡಿ ಕಂದಾಯ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಾಮಾಣಿಕ ರಾಜಕಾರಣಿಯೂ ಆದ ಕೃಷ್ಣ ಬೈರೇಗೌಡರು ಅತ್ಯಂತ ತಾಳ್ಮೆ ಮತ್ತು ಸಮರ್ಪಣೆಯಿಂದ ಸಕಲೇಶಪುರದಲ್ಲಿ ಸಾರ್ವಜನಿಕ ಕುಂದುಕೊರತೆಗಳ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿದ್ದಾರೆ. ಯಾವುದೇ ಪಕ್ಷ, ಜಾತಿ ಅಥವಾ ಧರ್ಮ ನೋಡದೇ ಎಲ್ಲ ಸಾರ್ವಜನಿಕ ಬಂಧುಗಳ ಅಹವಾಲುಗಳನ್ನು ಸಮಾನತೆಯಿಂದ ಸ್ವೀಕರಿಸಿ, ಜನಪರ ಆಡಳಿತಕ್ಕೆ ಉತ್ತಮ ಉದಾಹರಣೆ ನೀಡಿದ್ದಾರೆ. ಆದರೆ ಈ ಯಶಸ್ವಿ ಕಾರ್ಯಕ್ರಮ ಅಂತಿಮ ಹಂತ ತಲುಪುವ ಸಂದರ್ಭದಲ್ಲಿ, ಸಕಲೇಶಪುರ ತಾಲ್ಲೂಕು ಕಚೇರಿಯ ದ್ವಾರದಲ್ಲಿ ನಡೆದ ಅಹಿತಕರ ಘಟನೆಯು ಅತ್ಯಂತ ಖಂಡನೀಯವಾಗಿದೆ ಎಂದರು.

# ಒಂದೇ ದಿನದಲ್ಲಿ ಹಂತಕ ಆನೆ ಸೆರೆ

## ಎರಡು ತಿಂಗಳಲ್ಲಿ ಎಲ್ಲ ಪುಂಡಾನೆ ಸ್ಥಳಾಂತರ ಭರವಸೆ ನೀಡಿದ ಸಚಿವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಸಕಲೇಶಪುರ ತಾಲ್ಲೂಕಿನ ಮೂಗಲಿ ಗ್ರಾಮದಲ್ಲಿ ಶೋಭಾ ಎಂಬ ಮಹಿಳೆಯನ್ನು ಬಲಿ ಪಡೆದಿದ್ದ ನರಹಂತಕ ಸಲಗನನ್ನು ಕಡೆಗೂ ಖೆಡ್ಡಾಕ್ಕೆ ಬೀಳಿಸಲಾಗಿದೆ.

ಶುಕ್ರವಾರ ಬೆಳಗ್ಗೆಯಿಂದಲೇ ಅರಣ್ಯ ಇಲಾಖೆ ಅಧಿಕಾರಿಗಳು, ವೈದ್ಯರು ಹಾಗೂ ಸಿಬ್ಬಂದಿ ಕಾರ್ಯಾಚರಣೆ ಆರಂಭಿಸಿದ್ದರು. ಮೊದಲು ಆಲೂರು ಭಾಗದಲ್ಲಿ ಶೋಧ ನಡೆಯಿತು. ಆದರೆ ಟ್ರ್ಯಾಕ್ ಮಾಡುತ್ತಿದ್ದ ಇಟಿಎಫ್ ಸಿಬ್ಬಂದಿ ಕೊನೆಗೆ ಡ್ರೋಣ್ ಹಾರಿಸಿ ಬೇಲೂರು ತಾಲ್ಲೂಕಿನ ಚಂದಾಪುರ ಬಳಿಯ ಅರಣ್ಯದಲ್ಲಿ ಕಾಡಾನೆ ಇರುವುದನ್ನು ಪತ್ತೆ ಮಾಡಿದರು.

ನಂತರ ಗುರುವಾರ ರಾತ್ರಿಯೇ ಆಲೂರು ತಾಲೂಕು ಬೈರಾಪುರ ವಲಯ ಅರಣ್ಯ ಕಚೇರಿ ಬಳಿಗೆ ಬಂದು ತಂಗಿದ್ದ ಐದು ಕುಮ್ಕಿ ಕಾಡಾನೆಗಳನ್ನು ಲಾರಿಯಲ್ಲಿ ಚಂದಾಪುರ ಬಳಿಗೆ ಕರೆ ತರಲಾಯಿತು.

ಪಳಗಿದ ಆನೆಗಳಾದ ಧನಂಜಯ, ಸುಗ್ರೀವ, ಶ್ರೀರಾಮ, ಲಕ್ಷ್ಮಣ ಹಾಗೂ ಅಯ್ಯಪ್ಪ ಆನೆಗಳು ಆಗಮಿಸಿದ ನಂತರ



ಪಶು ವೈದ್ಯ ಡಾ.ರಮೇಶ್ ಅವರು, ಪುಂಡಾನೆಗೆ ಅರವಳಿಕೆ ಚುಚ್ಚುಮದ್ದು ನೀಡಿದರು. ಅದಾದ ಬಳಿಕ ಸುಮಾರು 2 ಗಂಟೆ ಕಾಲ ನೆಲಕ್ಕೆ ಬೀಳದ ಪುಂಡಾನೆ ಒಂದು ಕಡೆಯಿಂದ ಮತ್ತೊಂದು ಕಡೆಗೆ ಓಡಲು ಆರಂಭಿಸಿತು.

ಆದರೂ ಬಿಡ ಕುಮ್ಕಿ ಆನೆಗಳು, ಹತ್ತಾರು ಕಿಮೀ ಬೆನ್ನಟ್ಟಿ ಅಟ್ಟಾಡಿಸಿ ಧನಂಜಯ ಅಂಡ್ ಟೀಂ ಪುಂಡಾನೆಯನ್ನು ಬೆಳ್ಳಾವರ ಕಾಫಿ ತೋಟದಲ್ಲಿ ಬಲೆಗೆ ಬೀಳಿಸುವಲ್ಲಿ ಯಶಸ್ವಿ ಆದವು. ಸುಮಾರು 2 ಗಂಟೆ ಸಲಗ ಯಾರಿಗೂ ಸಿಗದೆ ಎಲ್ಲೆಂದರಲ್ಲಿ ಓಡಾಡಿದ ಸಲಗ, 3 ಗಂಟೆ ಕಾರ್ಯಾಚರಣೆ ನಂತರ ಪುಂಡಾನೆ ನೆಲಕ್ಕೆ ಉರುಳಿ ಬಂಧಿಯಾಯಿತು.

ಜ.13 ರಂದು ಶೋಭಾ ಎಂಬುವರನ್ನು ಇದೇ ಆನೆ ಬಲಿ ಪಡೆದಿತ್ತು. ಶುಕ್ರವಾರ ನಿರಂತರ ಪ್ರಯತ್ನದಿಂದ ಪುಂಡಾನೆ ಸೆರೆ ಹಿಡಿಯಲಾಗಿದೆ. ಕಡೆಗೆ ಕಾಡಾನೆಗೆ ನೀರು ಹಾಕಿ ಅರಣ್ಯ ಇಲಾಖೆ ಇಟಿಎಫ್ ಸಿಬ್ಬಂದಿ ಆರೈಕೆ ಮಾಡಿದರು. ನಂತರ ಬೇರೆಡೆಗೆ ಸ್ಥಳಾಂತರ ಮಾಡಲಾಯಿತು.

> **ಕಾಡಾನೆ ಸಮಸ್ಯೆ ಅತಿಯಾಗಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ, ಮೈಸೂರು, ಚಿಕ್ಕಮಗಳೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಮೂರು ಜಾಗ ಗುರುತಿಸಿದ್ದು ಇಲ್ಲಿರುವ ಆನೆಗಳನ್ನು ವಿಭಾಗಗಳನ್ನಾಗಿ ವಿಂಗಡಿಸಿ ಸಾಗಿಸಲಾಗುವುದು ಎಂದು ಸಚಿವ ಕೃಷ್ಣಬೈರೇಗೌಡ ಭರವಸೆ ನೀಡಿದರು.**

ಸುಮಾರು 25 ದಿನಗಳ ಹಿಂದೆ ಕೊಡಗು ಜಿಲ್ಲೆಯಿಂದ ಆಲೂರು ಭಾಗಕ್ಕೆ ಬಂದಿದ್ದ ನರ ಹಂತಕ ಆನೆ, ಆಲೂರು ನಂತರ ಬೇಲೂರು ವಲಯ ವ್ಯಾಪ್ತಿಯಲ್ಲಿ ಓಡಾಡುತ್ತಿತ್ತು.

**2 ತಿಂಗಳಲ್ಲಿ ಪುಂಡಾನೆ ಸೆರೆ:**

ಇದಕ್ಕೂ ಮುನ್ನ ಸಕಲೇಶಪುರದ ಮಿನಿ ವಿಧಾನ ಸೌಧದಲ್ಲಿ ಬೆಳೆಗಾರರು ಹಾಗೂ ಹೋರಾಟಗಾರರ ಸಭೆಯಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ, ಇನ್ನೆರಡು ತಿಂಗಳಿನಲ್ಲಿ ಜಿಲ್ಲೆಯಲ್ಲಿ ಹೆಚ್ಚು ತೊಂದರೆ ನೀಡುತ್ತಿರುವ ಕಾಡಾನೆಗಳನ್ನು ಸೆರೆ ಹಿಡಿದು ಸಂಪೂರ್ಣ ಸ್ಥಳಾಂತರಿಸಲಾಗುವುದು ಎಂದು ಹೇಳಿದರು.

ಕಾಡಾನೆ ಸಮಸ್ಯೆಗಳ ಬಗ್ಗೆ ನನಗೆ ಅರಿವಿದ್ದು, ಕಳೆದ ಬಾರಿ ಕ್ಷೇತ್ರಕ್ಕೆ ಭೇಟಿ ನೀಡಿದ್ದ ಅರಣ್ಯ ಸಚಿವರು ನೀಡಿದ್ದ ಭರವಸೆಯಂತೆ ಭದ್ರ ಅಭಯಾರಣ್ಯದಲ್ಲಿ ಆನೆಧಾಮ ಸ್ಥಾಪನೆಗೆ ರಾಜ್ಯದಿಂದ ಪ್ರಸ್ತಾವನೆ ಸಲ್ಲಿಕೆಯಾಗಿದೆ.

ಕೇಂದ್ರ ಸರ್ಕಾರದ ಅನುಮತಿ ಎಲ್ಲಿ ಬೇಕಿಲ್ಲವೋ ಅಂಥ ಸ್ಥಳಗಳಲ್ಲಿ ಕಾಡಾನೆ ಸ್ಥಳಾಂತರ ಮಾಡಲು ಕ್ರಮ ವಹಿಸಲಾಗುವುದು. ಆದರೆ ಭದ್ರಾ ಅಭ್ಯಯಾರಣ್ಯ ಹುಲಿ ಸಂರಕ್ಷಿತ ಸ್ಥಳವಾಗಿರುವುದರಿಂದ ಕೇಂದ್ರ ಸರ್ಕಾರದಿಂದ ಇದುವರೆಗೆ ಯಾವುದೇ ಸೂಚನೆ ಬಂದಿಲ್ಲ. ಅಷ್ಟು ಹೊರತುಪಡಿಸಿ ರಾಜ್ಯ ಸರ್ಕಾರದಿಂದ ಯಾವುದೇ ನಿರ್ಲಕ್ಷ್ಯತನ ತೋರಲಾಗಿಲ್ಲ ಎಂದರು.

ಈ ವೇಳೆ ಹೋರಾಟಗಾರರಾದ ಯಡೇಹಳ್ಳಿ ಮಂಜುನಾಥ್, ರಮೇಶ್ ಪೂಜಾರಿ, ಕೌಡಳ್ಳಿ ಲೋಹಿತ್ ಮೊದಲಾದವರಿದ್ದರು.

# ಪ್ರಯತ್ನಕ್ಕೆ ಪ್ರಾರ್ಥನೆ ಸೇರಿದರೆ ಯಶಸ್ಸು ಸಾಧ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಯತ್ನದ ಜೊತೆಗೆ ಪ್ರಾರ್ಥನೆಯ ಫಲ ಸೇರಿದಾಗಲೇ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದು ವಿಶ್ವ ಒಕ್ಕಲಿಗರ ಮಠದ ಮಠಾಧೀಶರಾದ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ ಅವರು ಹೇಳಿದರು.

ನಗರದ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲೆ ಆವರಣದಲ್ಲಿ ಆಯೋಜಿಸಿದ್ದ ಸ್ಕಾಲರ್ಸ್ ಶಾಲೆಯ 14ನೇ ವರ್ಷದ ವಾರ್ಷಿಕೋತ್ಸವ ಟಸ್ಕಾಲರ್ಸ್ ಸಂಭ್ರಮಟ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಕ್ಕಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಬೇಕು. ಸರಿಯಾದ ಸಿದ್ಧತೆ, ಶಿಸ್ತು ಮತ್ತು ಮನಸ್ಸಿನ ಧೈರ್ಯವೇ ಯಶಸ್ಸಿನ ಮೂಲ ಎಂದು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೋಷಕರಿಗೆ ಮಾರ್ಗದರ್ಶನ ನೀಡಿದರು.

ಎರಡು ದಿನಗಳ ಕಾಲ



ನಡೆಯುತ್ತಿರುವ ಸ್ಕಾಲರ್ಸ್ ಸಂಭ್ರಮೋತ್ಸವದಲ್ಲಿ ವಿಶ್ವ ಒಕ್ಕಲಿಗರ ಮಠ, ಬೆಂಗಳೂರುದ ಶ್ರೀ ನಿಶ್ಚಲಾನಂದನಾಥ ಸ್ವಾಮೀಜಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ಎಚ್.ಎಲ್. ಮಲ್ಲೇಶಗೌಡ, ಹೊಳೆನರಸೀಪುರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ರಾಮೇಗೌಡ ಅವರು ಅತಿಥಿಗಳಾಗಿ ಪಾಲ್ಗೊಂಡಿದ್ದರು.

ವಾರ್ಷಿಕೋತ್ಸವಕ್ಕೂ ಮುನ್ನ ಸ್ವಾಮೀಜಿ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಪರೀಕ್ಷೆ ಎಂದರೇನು, ನಿರ್ಭೀತಿಯಿಂದ ಪರೀಕ್ಷೆ ಬರೆಯುವ ವಿಧಾನ, ಪರಿಣಾಮಕಾರಿ ಪರೀಕ್ಷಾ ಸಿದ್ಧತೆ ಹೇಗಿರಬೇಕು ಎಂಬ ವಿಷಯಗಳ ಕುರಿತು ಪ್ರೇರಣಾತ್ಮಕವಾಗಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಡಾ. ಎಚ್.ಎಲ್. ಮಲ್ಲೇಶಗೌಡ ಅವರು, ಶಾಲೆಯಲ್ಲಿ ನಡೆಯುವ ಚಟುವಟಿಕೆಗಳು ಅದರ ಮೌಲ್ಯ, ಚಿಂತನೆ ಮತ್ತು ಧೋರಣೆಯನ್ನು ಪ್ರತಿಬಿಂಬಿಸುತ್ತವೆ. ಉತ್ತಮ ಸಂಸ್ಕೃತಿಯನ್ನು ಬೆಳೆಸುವಲ್ಲಿ ಸ್ಕಾಲರ್ಸ್ ಶಾಲೆ ಮಾದರಿಯಾಗಿದೆ ಎಂದು ಪ್ರಶಂಸಿಸಿದರು. ಪ್ರಾಂಶುಪಾಲರಾದ ರಾಮೇಗೌಡ ಅವರು, ಕೇವಲ ಕಟ್ಟಡ ನಿರ್ಮಾಣವಲ್ಲ, ಮಕ್ಕಳನ್ನು ಸತ್ ಪ್ರಜೆಗಳಾಗಿ, ಸರ್ವಾಂಗೀಣ ವ್ಯಕ್ತಿತ್ವ ಹೊಂದಿದವರಾಗಿ ರೂಪಿಸುವ ಮೂಲ ಶಿಕ್ಷಣ ನೀಡುವ ಹಂಬಲ ಸ್ಕಾಲರ್ಸ್ ಶಾಲೆಗೆ ಇರುವುದೇ ಸಂತಸದ ಸಂಗತಿ ಎಂದು ಹೇಳಿದರು. ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಯಕ್ಷಗಾನ ಕಾಳಿ ನೃತ್ಯರೂಪಕ, ಸುಭಾಷ್ ಚಂದ್ರ ಬೋಸರ ದೇಶಪ್ರೇಮದ ನೃತ್ಯ, ಕನ್ನಡಾಭಿಮಾನ ಮೂಡಿಸುವ ಕರ್ನಾಟಕ ವೈಭವ, ಭಾರತದ ವಿವಿಧ ಸಂಸ್ಕೃತಿಗಳನ್ನು ಬಿಂಬಿಸುವ ನೃತ್ಯ ಪ್ರದರ್ಶನಗಳು ನಡೆದವು. ವಿದ್ಯಾರ್ಥಿಗಳ ಮನಮೋಹಕ ಪ್ರದರ್ಶನಗಳು ಪೋಷಕರು ಹಾಗೂ ಪ್ರೇಕ್ಷಕರನ್ನು ರಂಜಿಸಿದವು.

ಈ ಸಂದರ್ಭದಲ್ಲಿ ಶಾಲೆಯ ಆಡಳಿತಾಧಿಕಾರಿ ಡಾ. ಎಚ್.ಎನ್. ಚಂದ್ರಶೇಖರ್, ಸಂಸ್ಥಾಪಕಿ ಶ್ರೀಮತಿ ಲಕ್ಷ್ಮೀನಾಗರಾಜು, ಕಾರ್ಯದರ್ಶಿ ಶ್ರೀಮತಿ ಮಮತಾ ಚಂದ್ರಶೇಖರ್, ಶಾಲಾ ಸಿಬ್ಬಂದಿ ಹಾಗೂ ಪೋಷಕರು ಉಪಸ್ಥಿತರಿದ್ದು ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.

# ಗಮಕ ಹಬ್ಬ: ಆಸೂರಿ ಕೆ. ರಾಮಸ್ವಾಮಿ ಅಯ್ಯಂಗಾರ್ ಅವರ ಭರತ ಭಕ್ತಿಕಾವ್ಯ ಲೋಕಾರ್ಪಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕರ್ನಾಟಕ ಗಮಕ ಕಲಾಪರಿಷತ್ತು, ಬೆಂಗಳೂರು?ಹಾಸನ ಜಿಲ್ಲಾ ಘಟಕ, ಶ್ರೀ ಸೀತಾರಾಮಾಂಜನೇಯ ಸೇವಾ ಸಮಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಂಸ್ಕಾರ ಭಾರತೀ ಹಾಸನ ಜಿಲ್ಲಾ ಸಮಿತಿ ಹಾಗೂ ಹಾಸನ ನಗರ ಗೃಹನಿರ್ಮಾಣ ಸಹಕಾರಿ ಸಂಘ ಇವರ ಸಹಯೋಗದಲ್ಲಿ ನಗರದ ಶ್ರೀ ಸೀತಾರಾಮಾಂಜನೇಯ ದೇವಾಲಯದ ಸಪ್ತಪದಿ ಸೌದಾಮಿನೀ ಸಭಾಂಗಣದಲ್ಲಿ ಗಮಕ ಹಬ್ಬ?ಕವಿನಮನ ಕಾರ್ಯಕ್ರಮ ಭಕ್ತಿಭಾವಪೂರ್ಣವಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಸರಳ ಕವಿ ಆಸೂರಿ ಕೆ. ರಾಮಸ್ವಾಮಿ ಅಯ್ಯಂಗಾರ್ ಅವರ ವಿರಚಿತ ಮರುಮುದ್ರಿತ ಕೃತಿ ಭರತಭಕ್ತಿಕಾವ್ಯ ವನ್ನು ಉಜಿರೆ ಧರ್ಮಸ್ಥಳ ಮಂಜುನಾಥೇಶ್ವರ ಮಹಾವಿದ್ಯಾಲಯದ ಕುಲಸಚಿವರು ಹಾಗೂ ಸಂಸ್ಕೃತ ಪ್ರಾಧ್ಯಾಪಕರಾದ ವಿದ್ವಾನ್ ಡಾ. ಶ್ರೀಧರ ಭಟ್ ಅವರು ಲೋಕಾರ್ಪಣೆ ಮಾಡಿದರು.

ವೇದಿಕೆಯಲ್ಲಿ ಆಸೂರಿಯವರ ಮೊಮ್ಮಕ್ಕಳಾದ



ವಿದುಷಿ ಪದ್ಮಜಾ ಶ್ರೀನಿವಾಸನ್ ಮತ್ತು ಶ್ರೀನಿವಾಸ್, ಕಲಾಶ್ರೀ ಗಣೇಶ್ ಉಡುಪ, ಪ್ರೊ. ಜಿ.ಎನ್. ಅನಸೂಯ, ನಾರಾಯಣ, ಕುಮಾರಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ವಿದುಷಿ ಪದ್ಮಜಾ ಶ್ರೀನಿವಾಸ್ ಪರಿವಾರದ ಪ್ರಾಯೋಜಕತ್ವದಲ್ಲಿ ನಡೆದ ಗಮಕ ಕಾರ್ಯಕ್ರಮದಲ್ಲಿ ಬೆಳ್ತಂಗಡಿಯ ಗಮಕ ವಿದ್ವಾನ್ ವಿಷ್ಣುಪ್ರಸಾದ್ ಕಲ್ಲೂರಾಯ ಅವರು ಆಸೂರಿ ಕೆ. ರಾಮಸ್ವಾಮಿ ಅಯ್ಯಂಗಾರ್ ವಿರಚಿತ ಗೋಕರ್ಣನಾಥ ಮಹಿಮಾದರ್ಶ ಕಾವ್ಯದಿಂದ ಆತ್ಮಲಿಂಗ ಪ್ರಸಂಗವನ್ನು ತಮ್ಮ ಕಂಠಸಿರಿಯಿಂದ ಸುಶ್ರಾವ್ಯವಾಗಿ ಗಾಯನ ಮಾಡಿ ಶ್ರೋತೃಗಳ ಮೆಚ್ಚುಗೆಗೆ ಪಾತ್ರರಾದರು.

ಅವರ ಗಾಯನಕ್ಕೆ ಉಜಿರೆ ಎಸ್.ಡಿ.ಎಮ್. ಮಹಾವಿದ್ಯಾಲಯದ ಕುಲಸಚಿವರಾದ ವಿದ್ವಾನ್ ಡಾ. ಶ್ರೀಧರ ಭಟ್ ಅವರು ವಿದ್ವತ್ಪೂರ್ಣ ವ್ಯಾಖ್ಯಾನ ನೀಡಿದರಿಂದ ಶ್ರೋತೃವರ್ಗ ಮಂತ್ರಮುಗ್ಧಗೊಂಡಿತು.

ಈ ಸಂದರ್ಭದಲ್ಲೇ ಕಾರ್ಯಕ್ರಮದ ಪ್ರಾಯೋಜಕರಾದ ವಿದುಷಿ ಪದ್ಮಜಾ ಶ್ರೀನಿವಾಸ್ ದಂಪತಿಗಳು ಹಾಗೂ ಡಾ. ಅನೂಷ ಕೆದ್ಲಾಯ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಮನ್ರೇಗಾ ಯೋಜನೆ ಬದಲು

## ಕೇಂದ್ರದ ವಿರುದ್ಧ ಶಿವಲಿಂಗೇಗೌಡ ನೇತೃತ್ವದಲ್ಲಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ರೈತಾಪಿ ವರ್ಗಕ್ಕೆ ಸಂಜೀವಿನಿ ಕಾರ್ಮಿಕ ವರ್ಗಕ್ಕೆ ಆಶಾಕಿರಣವಾಗಿದ್ದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯನ್ನು ನಿಷ್ಕ್ರಿಯಗೊಳಿಸಿ, ಜಿ ರಾಮ್ ಜಿ ಹೆಸರಿನಲ್ಲಿ ಬದಲಿ ಯೋಜನೆಗೆ ಮುಂದಾಗಿರುವ ಕೇಂದ್ರ ಸರ್ಕಾರದ ನಿಲುವನ್ನು ಖಂಡಿಸಿ ಕರ್ನಾಟಕ ಗೃಹ ನಿರ್ಮಾಣ ಮಂಡಳಿ ಅಧ್ಯಕ್ಷರೂ ಆದ ಶಾಸಕ ಕೆ.ಎಂ ಶಿವಲಿಂಗೇಗೌಡ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆ ನಡೆಸುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.



ನಗರದ ಹೊರವಲಯದ ಕಸ್ತೂರಿ ಬಾ ಶಿಬಿರದ ಆವರಣದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಪ್ರತಿಮೆ ಮುಂದೆ ಧರಣಿ ಪ್ರತಿಭಟನೆ ನಡೆಸಿದ ಶಾಸಕರು, ಮುಖಂಡರು ಕೇಂದ್ರದ ನಡೆಯನ್ನು ತೀವ್ರವಾಗಿ ವಿರೋಧಿಸಿದರು.

ಈ ವೇಳೆ ಮಾತನಾಡಿದ ಶಿವಲಿಂಗೇಗೌಡರು, ದಿ.ಮನಮೋಹನ ಸಿಂಗ್ ಅವರು ಪ್ರಧಾನಮಂತ್ರಿಯಾಗಿದ್ದ ಸಂದರ್ಭದಲ್ಲಿ ದೇಶದ ರೈತರು ಮತ್ತು ಕಾರ್ಮಿಕರ ಹಿತ ಕಾಯುವ ದೃಷ್ಟಿಯಿಂದ ಉದ್ಯೋಗ ಖಾತ್ರಿ ಯೋಜನೆಯನ್ನು ಜಾರಿಗೆ ತಂದಿದ್ದರು.

ಆ ಮೂಲಕ ಸದೃಢ ಭಾರತ ನಿರ್ಮಾಣಕ್ಕೆ ಅಂದಿನ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ಸಂಕಲ್ಪ ಮಾಡಿತ್ತು. ಹಾಗಾಗಿ ಯೋಜನೆಯ ಆಶಯದಂತೆ ಹಳ್ಳಿಗಳ ಚಿತ್ರಣ ಬದಲಾಗುತ್ತಾ ಸಾಗುವುದರೊಂದಿಗೆ ಉದ್ಯೋಗ ಖಾತ್ರಿ ಯೋಜನೆ ದೇಶದ ರೈತರು ಹಾಗೂ ಕೂಲಿ ಕಾರ್ಮಿಕರಿಗೆ ಆಶಾಕಿರಣವಾಗಿತ್ತು ಎಂದರು.

ಇಂತಹ ಜನಪದ ಯೋಜನೆಯನ್ನು ನಿಷ್ಕ್ರಿಯಗೊಳಿಸಿ ಜಿ ರಾಮ್ ಜಿ ಹೆಸರಿನಲ್ಲಿ ನೂತನ ಯೋಜನೆ ಅನುಷ್ಠಾನಕ್ಕೆ ತರಲು ಮುಂದಾಗಿರುವ ಕೇಂದ್ರ ಬಿಜೆಪಿ ಸರ್ಕಾರದ ನಿಲುವು ಕಳವಳಕ್ಕೆ ಕಾರಣವಾಗಿದೆ.

ಕಾಂಗ್ರೆಸ್ ಪಕ್ಷ ಇದನ್ನು ಖಂಡಿಸುವುದಲ್ಲದೆ ರಾಜ್ಯ ವ್ಯಾಪಿ ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು.

ಗಂಡಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೆಟ್ರೋ ಬಾಬು ಮಾತನಾಡಿ ಸ್ವಾರ್ಥ ರಾಜಕಾರಣಕ್ಕಾಗಿ ಜನಪರ ಯೋಜನೆಯ ಸ್ಥಗಿತಗೊಳಿಸುವುದು, ಅದರಲ್ಲೂ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಹೆಸರನ್ನ ಬದಲಿಸುವ ಮೂಲಕ ನೂತನ ಯೋಜನೆಗೆ ಜಿ ರಾಮ್ ಜಿ ಎಂದು ನಾಮಕರಣ ಮಾಡಲು ಹೊರಟಿರುವ ಕೇಂದ್ರ ಸರ್ಕಾರದ ನಿಲುವು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಗೆ ಮಾಡಿದ ಅಪಮಾನ ಹಾಗೂ ದೇಶದ ಜನತೆಯ ವಿರುದ್ಧವಾಗಿ ತೆಗೆದುಕೊಂಡಿರುವ ನಿರ್ಣಯ ಎಂದು ಕೇಂದ್ರ ಸರ್ಕಾರದ ವಿರುದ್ಧ ಕಿಡಿ ಕಾರಿದರು.

ಪ್ರತಿಭಟನೆಯಲ್ಲಿ ಬಾಣಾವರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್, ಮಾಜಿ ಅಧ್ಯಕ್ಷ ಗಂಜಿಗೆರೆ ಚಂದ್ರಶೇಖರ್, ಕಾಂಗ್ರೆಸ್ ಹಿರಿಯ ಮುಖಂಡ ಶಶಿಧರ್, ನಗರಸಭೆ ನಿಕಟ ಪೂರ್ವ ಅಧ್ಯಕ್ಷ ಎಂ.ಸಮಿವುಲ್ಲಾ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷ ಗೀಜಿಹಳ್ಳಿ ಧರ್ಮಶೇಖರ್ ಮಾತನಾಡಿದರು.

ನಗರ ಸಭೆ ಮಾಜಿ ಸದಸ್ಯರಾದ ವೆಂಕಟಮುನಿ ಉಮಾ ಶಂಕರ್ ಶ್ರೀನಿವಾಸ್, ದರ್ಶನ್, ಎಪಿಎಂಸಿ ಮಾಜಿ ಅಧ್ಯಕ್ಷ ಜಯರಾಂ, ಗೀಜಿಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಧರ್ಮೇಶ್, ದುಮ್ಮೇನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಗಿರೀಶ್, ಸೇರಿದಂತೆ ಮತ್ತು ಇತರರು ಉಪಸ್ಥಿತರಿದ್ದರು.

## ಮಧುಸೂಧನ ಸಾಯಿಗೆ ಪ್ರೆಸ್ ಕ್ಲಬ್ ಆಫ್ ಬೆಂಗಳೂರು ವಾರ್ಷಿಕ ವಿಶೇಷ ಗೌರವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಆರೋಗ್ಯ, ಶಿಕ್ಷಣ ಹಾಗೂ ಸಾಮಾಜಿಕ ಸೇವಾ ಕ್ಷೇತ್ರಗಳಲ್ಲಿ ಅನನ್ಯ ಸೇವೆ ಸಲ್ಲಿಸುತ್ತಿರುವ ಚಿಕ್ಕಬಳ್ಳಾಪುರ ಜಿಲ್ಲೆಯ ಮುದ್ದೇನಹಳ್ಳಿಯ ಶ್ರೀ ಸತ್ಯಸಾಯಿ ಲೋಕ ಸೇವಾ ಟ್ರಸ್ಟ್‌ನ ಅಧ್ಯಕ್ಷರಾದ ಶ್ರೀ ಮಧುಸೂಧನ ಸಾಯಿ ಅವರಿಗೆ ಪ್ರತಿಷ್ಠಿತ ಪ್ರೆಸ್ ಕ್ಲಬ್ ಆಫ್ ಬೆಂಗಳೂರು ವತಿಯಿಂದ 2026ನೇ ಸಾಲಿನ ವಾರ್ಷಿಕ ವಿಶೇಷ ಗೌರವ ನೀಡಿ ಸನ್ಮಾನಿಸಲಾಯಿತು.

ಶ್ರೀ ಸತ್ಯಸಾಯಿ ಲೋಕ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಈ ಗೌರವ ಪ್ರದಾನ ಮಾಡಲಾಯಿತು.

ಸಮಾಜದ ಹಿಂದುಳಿದ ವರ್ಗಗಳ ಶೈಕ್ಷಣಿಕ ಅಭಿವೃದ್ಧಿ, ಉಚಿತ ಆರೋಗ್ಯ ಸೇವೆಗಳು ಹಾಗೂ ಸಮಗ್ರ ಸಾಮಾಜಿಕ ಕಲ್ಯಾಣಕ್ಕಾಗಿ ಶ್ರೀ ಮಧುಸೂಧನ ಸಾಯಿ ಅವರು ಕೈಗೊಂಡಿರುವ ಸೇವೆಗಳನ್ನು ಗಮನಿಸಿ ಈ ಪ್ರಶಸ್ತಿ ನೀಡಲಾಗಿದೆ.

ಕಾರ್ಯಕ್ರಮದಲ್ಲಿ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಹಾಗೂ ಶಾಸಕರಾದ ಟಿ.ಬಿ. ಜಯಚಂದ್ರ, ಪ್ರೆಸ್‌ಕ್ಲಬ್ ಆಫ್ ಬೆಂಗಳೂರು ಅಧ್ಯಕ್ಷರಾದ ಆರ್. ಶ್ರೀಧರ್, ಪ್ರಧಾನ ಕಾರ್ಯದರ್ಶಿ ಶಿವಕುಮಾರ್, ಖಜಾಂಚಿ ಶರಣು ಹಾಗೂ ನಿರ್ದೇಶಕ ಸಿ.ಆರ್. ಮಂಜುನಾಥ್ ಉಪಸ್ಥಿತರಿದ್ದು, ಮಧುಸೂಧನ ಸಾಯಿ ಅವರ ಸೇವೆಯನ್ನು ಪ್ರಶಂಸಿಸಿದರು.

ಪ್ರೆಸ್‌ಕ್ಲಬ್ ಆಫ್ ಬೆಂಗಳೂರು ವತಿಯಿಂದ ಸಮಾಜಕ್ಕೆ ವಿಶಿಷ್ಟ ಕೊಡುಗೆ ನೀಡುತ್ತಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಈ ವಾರ್ಷಿಕ ವಿಶೇಷ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ ಎಂದು ಈ ಸಂದರ್ಭದಲ್ಲಿ ತಿಳಿಸಲಾಯಿತು.

# ಮಗಳ ಪ್ರಿಯಕರನ ಚಾಕು ಇರಿತಕ್ಕೆ ಬಲಿಯಾದ ತಂದೆ!

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತನ್ನ ಇಚ್ಛೆಗೆ ವಿರುದ್ಧವಾಗಿ ಮದುವೆ ನಿಗದಿ ಮಾಡಲು ಯತ್ನಿಸಿದ ತಂದೆಯ ನಿರ್ಧಾರ ವಿರೋಧಿಸಿ ತಾನು ವಿವಾಹವಾಗಲು ಬಯಸಿದ್ದ ಸಂಬಂಧಿ ಮನೆ ಸೇರಿದ್ದ ಮಗಳನ್ನು ಕರೆದೊಯ್ಯಲು ಬಂದ ತಂದೆ ಸಂಬಂಧಿಯಿಂದಲೇ ಹತ್ಯೆಯಾಗಿರುವ ಘಟನೆ ಬೇಲೂರು ತಾಲೂಕಿನ ಬೆಳ್ಳಾವರದಲ್ಲಿ ನಡೆದಿದೆ.



ಕೊಲೆಯಾದ ಅನಿಲ್ | ಆರೋಪಿ ರಾಜೇಶ್

ಮೃತರನ್ನು ಅನಿಲ್ (46) ಅವರನ್ನು ಸಂಬಂಧಿಯೇ ಆಗಿರುವ ರಾಜೇಶ್ (30) ಹತ್ಯೆ ಮಾಡಿದ್ದಾನೆ ಎನ್ನಲಾಗಿದೆ.

ಅನಿಲ್ ಅವರ ಪುತ್ರಿ ಅನಿಷಾ ಕೆಲ ಸಮಯದಿಂದ ರಾಜೇಶ್ ಅವರ ಮನೆಯಲ್ಲಿದ್ದಳು. ಈ ಹಿಂದೆ ಅನಿಷಾಳ ಮದುವೆಯನ್ನು ರಾಜೇಶ್ ಜತೆ ನಡೆಸುವ ಕುರಿತು ಕುಟುಂಬದವರ ನಡುವೆ ಮಾತುಕತೆ ನಡೆದಿದ್ದರೂ, ಆ ವೇಳೆ ಅನಿಷಾ ಅಪ್ರಾಪ್ತಳಾಗಿದ್ದಳು.

ಇತ್ತೀಚೆಗೆ ಅನಿಷಾಗೆ 18 ವರ್ಷ ತುಂಬಿದ ಹಿನ್ನೆಲೆ, ಅನಿಲ್ ಅವರು ಮಗಳನ್ನು ಬೇರೆ ಯುವಕನ ಜತೆ ಮದುವೆ ಮಾಡಲು ಸಿದ್ಧತೆ ನಡೆಸಿದ್ದರು. ಇದರಿಂದ ಅಸಮಾಧಾನಗೊಂಡ ಅನಿಷಾ ರಾಜೇಶ್ ಮನೆಗೆ ತೆರಳಿದ್ದಳು.

ಗುರುವಾರ ರಾತ್ರಿ ಮಗಳನ್ನು ಕರೆತರಲು ಅನಿಲ್ ಅವರು ಬೆಳ್ಳಾವರ ಗ್ರಾಮದಲ್ಲಿರುವ ರಾಜೇಶ್ ಮನೆಗೆ ತೆರಳಿದ್ದು, ಈ ವೇಳೆ ತಂದೆಯ ಜತೆ ಬರಲು ನಿರಾಕರಿಸಿದ ಅನಿಷಾ ಮತ್ತು ಅನಿಲ್ ನಡುವೆ ಜಗಳ ನಡೆದಿದೆ. ಈ ವೇಳೆ ರಾಜೇಶ್ ಮಧ್ಯ ಪ್ರವೇಶಿಸಿದ್ದಾನೆ. ಈ ಸಂದರ್ಭದಲ್ಲಿ ಅನಿಲ್ ಚಾಕುವಿನಿಂದ ರಾಜೇಶ್ ಮೇಲೆ ಹಲ್ಲೆ ನಡೆಸಿದರೆನ್ನಲಾಗಿದೆ. ತಕ್ಷಣವೇ ಅದೇ ಚಾಕುವನ್ನು ಕಿತ್ತುಕೊಂಡ ರಾಜೇಶ್, ಅನಿಲ್ ಗೆ ಇರಿದಿದ್ದಾನೆ.

ಗಂಭೀರವಾಗಿ ಗಾಯಗೊಂಡ ಅನಿಲ್ ಅವರನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಅವರು ಮೃತಪಟ್ಟಿದ್ದಾರೆ.

ಘಟನೆಯ ಮಾಹಿತಿ ತಿಳಿದ ಕೂಡಲೇ ಅರೇಹಳ್ಳಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣವನ್ನು ದಾಖಲಿಸಿಕೊಂಡಿದ್ದಾರೆ.

## ದೇವರು-ಶಕ್ತಿ ಎಂದರೆ ಆತ್ಮಸ್ಥೈರ್ಯ: ಕವಿತಾ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ನಾವು ಆತ್ಮಸಾಕ್ಷಿಗೆ ಅನುಗುಣವಾಗಿ ನಡೆದರೆ ನಮ್ಮಲ್ಲಿ ಆತ್ಮಸ್ಥೈರ್ಯ ಹೆಚ್ಚಲಿದೆ. ಇದರಿಂದ ನಾವು ಎಲ್ಲ ಕಷ್ಟ, ತೊಂದರೆಗಳನ್ನು ಸಮರ್ಥವಾಗಿ ಮೆಟ್ಟುನಿಂತು ಜೀವನದಲ್ಲಿ ಧೈರ್ಯವಾಗಿ ಮುನ್ನುಗ್ಗ ಬಹುದು ಎಂದು ಹಾಸನ ಮಹಾನಗರ ಪಾಲಿಕೆ ಇಂಜಿನಿಯರ್ ಹಾಗೂ ಟಿವಿ9 ಹೆಮ್ಮೆಯ ಕನ್ನಡತಿ ಪ್ರಶಸ್ತಿ ಪುರಸ್ಕೃತರಾದ ಕೆ.ಆರ್. ಕವಿತಾ ಹೇಳಿದರು.

ತಾಲೂಕಿನ ಅತ್ತಿಹಳ್ಳಿ ಜಾತ್ರಾ ಮೈದಾನದಲ್ಲಿ ಶ್ರೀ ವೀರಭದ್ರೇಶ್ವರಸ್ವಾಮಿ ಸೇವಾ

ಸಮಿತಿ ವತಿಯಿಂದ ಶ್ರೀ ಚನ್ನಕುಮಾರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ಶುಕ್ರವಾರ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಕಬಡ್ಡಿ ಹಾಗೂ ಥ್ರೋಬಾಲ್ ಪಂದ್ಯಾವಳಿ ಮತ್ತು ಪುರುಷರಿಗೆ-ಮಹಿಳೆಯರಿಗೆ ಓಟದ ಸ್ಪರ್ಧೆಯನ್ನು ಸತತ ಐದನೇ ಬಾರಿಗೆ ಉದ್ಘಾಟಿಸಿ ಅವರು ಮಾತನಾಡಿದರು.



ಪ್ರಪಂಚದಲ್ಲಿ ದೇವರು ಬಿಟ್ಟರೆ ನಂತರ ನಾವು ನಂಬುವುದು ವೈದ್ಯಾಧಿಕಾರಿಗಳನ್ನ. ಸ್ವಾಮೀಜಿ, ಪ್ರಧಾನಿ, ಸಿಎಂ, ಐಎಎಸ್ ಅಧಿಕಾರಿ ಯಾರೇ ಆಗಲೀ, ಎಲ್ಲರಿಗೂ ಜೀವದಾನ ನೀಡುವುದು ವೈದ್ಯರು. ಅಂತಹ ವೈದ್ಯರಿಗೂ ಕಾರ್ಯಕ್ರಮಕ್ಕೆ ಆಹ್ವಾನಿಸಿರುವುದು ಖುಷಿ ತಂದಿದೆ ಎಂದರು.

ಜೀವನದಲ್ಲಿ ದೇವರು, ಶಕ್ತಿ ಎಂದರೆ ಅದು ಆತ್ಮಸ್ಥೈರ್ಯ. ನಾವು ಬದುಕಿನಲ್ಲಿ ಆತ್ಮಸಾಕ್ಷಿಗೆ ಅನುಗುಣವಾಗಿ ನಡೆದರೆ ಆತ್ಮಸ್ಥೈರ್ಯ ವೃದ್ಧಿ ಆಗಲಿದೆ ಎಂದ ಅವರು, ಆತ್ಮಸ್ಥೈರ್ಯ ಹೆಚ್ಚಿದರೆ, ಯಾವುದೇ ಕಷ್ಟ ಎದುರಿರುವ ಶಕ್ತಿ ಸಿಗಲಿದೆ ಎಂದು ನುಡಿದರು. ನಾನು ನಗರ ಪ್ರದೇಶದಲ್ಲಿ ಬೆಳೆದಿದ್ದರೆ ಇಷ್ಟೊಂದು ಧೈರ್ಯ, ಶಕ್ತಿ ಇರುತ್ತಿತ್ತೋ ಇಲ್ಲಮೋ ಗೊತ್ತಿಲ್ಲ. ಏಕೆಂದರೆ ಸರ್ಕಾರಿ ವೃತ್ತಿಯಲ್ಲಿ ಅನೇಕ ಏಳು ಬೀಳು ಇರುತ್ತವೆ. ಅವಮಾನದ ಅನುಭವ ಆಗುತ್ತಿರುತ್ತದೆ. ಅದನ್ನೆಲ್ಲವನ್ನೂ ಮೆಟ್ಟಿನಿಂತು ಮುಂದೆ ಸಾಗುತ್ತಿದ್ದೇನೆ ಎಂದರೆ ಈ ಮಣ್ಣಿನಲ್ಲಿ ಹುಟ್ಟಿ ಬೆಳೆದಿರುವುದೇ ಪ್ರಮುಖ ಕಾರಣ ಎಂದರು. ಸಿಟಿಯಲ್ಲಿ ಇದ್ದಿದ್ದರೆ ಇಷ್ಟೊಂದು ಧೈರ್ಯ ಬರುತ್ತಿರಲಿಲ್ಲ ಎಂದು ನುಡಿದರು.

ಗ್ರಾಮೀಣ ಭಾಗದಲ್ಲಿ ಇಂಥ ಸ್ಪರ್ಧೆ ಏರ್ಪಡಿಸುವುದು ಕಷ್ಟದ ಕೆಲಸ, ಅದರಲ್ಲೂ ಮಲೆನಾಡು ಭಾಗದಲ್ಲಿ ಕಾಫಿ ಕೊಯ್ಲು ಸಂದರ್ಭದಲ್ಲಿ ಶ್ರಮ ಹಾಕಿ ಕಾರ್ಯಕ್ರಮ ಮಾಡಿರುವುದು ಶ್ಲಾಘಿಸಿ, ಅಚ್ಚುಕಟ್ಟು ಆಯೋಜನೆಗೆ ಅಭಿನಂದನೆ ಹೇಳಿದರು.

ಇದೇ ವೇಳೆ ಕ್ರೀಡಾಪಟುಗಳಿಗೆ ಶುಭಾಶಯ ಕೋರಿ, ಸ್ಪರ್ಧೆಯಲ್ಲಿ ಸೋಲು- ಗೆಲುವು ಸಾಮಾನ್ಯ. ಆದರೆ ಭಾಗಿಯಾಗುವುದು ಮುಖ್ಯ ಎಂದು ಹೇಳಿದರು., ಇದೇ ಮೊದಲ ಬಾರಿಗೆ ತಾಲೂಕು ಮಟ್ಟದ ಸ್ಪರ್ಧೆ ಮಾಡುತ್ತಿದ್ದೀರಿ, ಮುಂದಿನ ವರ್ಷ 60 ವರ್ಷ ತುಂಬಿದ ಪುರುಷರು-ಮಹಿಳೆಯರಿಗೆ ಓಟದ ಸ್ಪರ್ಧೆ ಏರ್ಪಡಿಸಬೇಕು ಎಂದು ಆಯೋಜಕರಲ್ಲಿ ಮನವಿ ಮಾಡಿದರು. ತವರೂರಿನ ಯಾವುದೇ

ಕಾರ್ಯಕ್ರಮದಲ್ಲಿ ಭಾಗಿಯಾಗುವುದು ಎಂದರೆ ಅದೊಂದು ಸೌಭಾಗ್ಯ.

ಇದಕ್ಕೆ ಅವಕಾಶ ನೀಡಿದ ವೀರಭದ್ರ ಸೇವಾ ಸಮಿತಿ ಸೇರಿದಂತೆ, ಗ್ರಾಮಸ್ಥರಿಗೆ ಧನ್ಯವಾದ ಹೇಳಿದರು. ಮಲೆನಾಡಿನ ಮಧ್ಯೆ ಇಂದು ಅಕ್ಷರಶಃ ಹಬ್ಬದ ವಾತಾವರಣ ನಿರ್ಮಾಣ ಆಗಿದೆ. ಪ್ರಕೃತಿ ಸೊಬಗಿನ ನಡುವೆ ಆಟೋಟ ನೋಡುವುದೇ ಒಂದು ಆನಂದ. ಇಂಥ ಅಪೂರ್ವ ಅವಕಾಶ ನೀಡಿದ್ದಕ್ಕೆ ಹರ್ಷ ವ್ಯಕ್ತಪಡಿಸಿದರು.

ಈ ವೇಳೆ ಕವಿತಾ ಅವರನ್ನೂ ಒಳಗೊಂಡಂತೆ ಅನೇಕರನ್ನು ಅಭಿನಂದಿಸಲಾಯಿತು. ಸೇವಾಸಮಿತಿ ಅಧ್ಯಕ್ಷ ಎ.ಪಿ.ಕೃಷ್ಣಮೂರ್ತಿ ಅಧ್ಯಕ್ಷತೆವಹಿಸಿದ್ದರು. ಸ್ಥಳೀಯ ಪಿಹೆಚ್‌ಸಿ ವೈದ್ಯ ಡಾ.ಶರತ್, ಗ್ರಾಪಂ ಅಧ್ಯಕ್ಷೆ ವನಜಾಕ್ಷಿ ಮೊದಲಾದವರಿದ್ದರು.

# ವಿದ್ಯಾರ್ಥಿಗಳ ಸಾಧನೆಯಿಂದ ಶಾಲೆ-ಪಾಲಕರಿಗೆ ಕೀರ್ತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹಾಸನ ರಾಯಲ್ ಅಪೋಲೊ ಸ್ಕೂಲ್ ನಲ್ಲಿ ಮೂಡುಬಿದಿರೆ ಎಕ್ಸ ಲೆಂಟ್ ವಿದ್ಯಾ ಸಂಸ್ಥೆ ವತಿಯಿಂದ ಇತ್ತೀಚೆಗೆ ನಡೆದ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದ ಪಟ್ಟಣದ ಜ್ಞಾನಸಾಗರ ಶಾಲೆಯ ವಿದ್ಯಾರ್ಥಿ ರೋಹನ್ ಅವರಿಗೆ ಸಂಸ್ಥೆ ವತಿಯಿಂದ ಅಭಿನಂದಿಸಲಾಯಿತು.




ನಂತರ ಸಂಸ್ಥೆಯ ಅಧ್ಯಕ್ಷ ಡಾ. ಕೆ. ನಾಗೇಶ್ ಮಾತನಾಡಿ, ವಿದ್ಯಾರ್ಥಿಗಳು ಸಾಧನೆ ಮಾಡಿದರೆ ಓದುತ್ತಿರುವ ಶಾಲೆಗಷ್ಟೇ ಅಲ್ಲದೆ ಹುಟ್ಟಿದ ಊರಿಗೂ ಹಾಗೂ ಹೆತ್ತವರಿಗೂ ಕೀರ್ತಿ ಸಿಗಲಿದೆ ಎಂದರು.

ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ಅತಿಮುಖ್ಯ. ಅಲ್ಲದೆ ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಉತ್ತಮ ವೇದಿಕೆ ಕಲ್ಪಿಸುವುದು ಶಾಲೆ ಹಾಗೂ ಶಿಕ್ಷಕರ ಜವಾಬ್ದಾರಿಯುತ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಸ್ಪರ್ಧೆ ಯಾವುದೇ ಇರಲಿ ಸೋಲು-ಗೆಲುವು ಇದ್ದೇ ಇರುತ್ತದೆ. ಸೋಲು ಹಾಗೂ ಗೆಲುವು ಎಂಬುದು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ.

ಗೆಲುವಿನಿಂದ ಬಹುಮಾನ ಸಿಕ್ಕರೆ ಸೋಲು ನೂರಾರು ಅನುಭವಗಳನ್ನು ಕಲಿಸುತ್ತದೆ. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಯಾವುದೇ ಒಂದು ಶಿಕ್ಷಣ ಸಂಸ್ಥೆಯು ಕೇವಲ ಗಳಿಕೆಗಾಗಿ ಶಾಲೆ ಪ್ರಾರಂಭಿಸುವುದಿಲ್ಲ.

ಬದಲಿಗೆ ಮಕ್ಕಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಶಿಕ್ಷಣ ಕಲ್ಪಿಸುವುದರ ಜೊತೆಗೆ ಕ್ರೀಡೆ, ಸಾಹಿತ್ಯ, ವಿಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಪರಿಚಯಿಸುತ್ತ ವಿದ್ಯಾರ್ಥಿಗಳ ಬದುಕಿಗೆ ದಾರಿ ದೀಪವಾಗಲಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆಯುವ ಮೂಲಕ 5 ಸಾವಿರ ರೂ. ನಗದು, ಟ್ರೋಫಿ ಹಾಗೂ ಪ್ರಶಸ್ತಿ ಪತ್ರ ಪಡೆದು ಶಾಲೆಗೆ ಒಳ್ಳೆಯ ಹೆಸರು ಹಾಗೂ ಕೀರ್ತಿ ತಂದಿರುವ ವಿದ್ಯಾರ್ಥಿ ರೋಹನ್ ಅವರ ಸಾಧನೆ ಹಾಗೂ ಪರಿಶ್ರಮವು ಮುಂದಿನ ಭವಿಷ್ಯಕ್ಕೆ ಮೆಟ್ಟಿಲು ಆಗಲಿದೆ ಎಂದು ಶ್ಲಾಘಿಸಿದರು.

ಸಂಸ್ಥೆಯ ಕಾರ್ಯನಿರ್ವಹಣಾಧಿಕಾರಿ ಡಾ. ಭಾರತಿ ನಾಗೇಶ್, ಡೀನ್ ಡಾ. ಸುಜಾ ಫಿಲಿಪ್, ಆಡಳಿತಾಧಿಕಾರಿ ಫಿಲಿಪ್.ಸಿ.ಪಿ ಹಾಗೂ ಶಿಕ್ಷಕ ವೃಂದ ಹಾಜರಿದ್ದರು.

# ನ್ಯಾಯಬೆಲೆ ಅಂಗಡಿ ಮಾಲೀಕರು ವಿತರಕರ ವಿರುದ್ಧ ಆರೋಪ ಸುಳ್ಳು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ನ್ಯಾಯಬೆಲೆ ಅಂಗಡಿ ಪಡಿತರ ವಿತರಕರು ಹಾಗೂ ಇಲಾಖೆ ಅಧಿಕಾರಿಗಳು ಲಂಚಾ ಪಡೆಯುತ್ತಿದ್ದಾರೆ ಎಂಬ ಆರೋಪ ಸತ್ಯಕ್ಕೆ ದೂರವಾಗಿದೆ, ಇದು ಅನವಶ್ಯಕ ಆರೋಪ ಎಂದು ಜಿಲ್ಲಾ ಸರ್ಕಾರಿ ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘದ ಅಧ್ಯಕ್ಷ ಚನ್ನಕೇಶವ ಸ್ಪಷ್ಟಪಡಿಸಿದರು.




ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷರು ಎಂದು ಹೇಳಿಕಕೊಂಡು ಕೆಲವರು ಸುದ್ದಿಗೋಷ್ಠಿ ನಡೆಸಿ ಜಿಲ್ಲಾ ಜಿಲ್ಲಾ ಆಹಾರ ಇಲಾಖೆ ಅಧಿಕಾರಿಗಳ ವಿರುದ್ಧ ಇಲ್ಲ ಸಲ್ಲದ ಆರೋಪ ಮಾಡಿದ್ದಾರೆ. ಅವರ ಆರೋಪದಲ್ಲಿ ಯಾವುದೇ ಹುರುಳಿಲ್ಲ, ನಾವು ನ್ಯಾಯ ಸಮ್ಮತವಾಗಿ ಪಡಿತರ ವಿತರಣೆ ಮಾಡುತ್ತಿದ್ದೇವೆ ಎಂದು ಹೇಳಿದರು.

ಜಿಲ್ಲೆಯಲ್ಲಿ 860 ಸರ್ಕಾರಿ ನ್ಯಾಯಬೆಲೆ ಅಂಗಡಿಗಳಿವೆ.

ಇದುವರೆಗೂ ಯಮೊಬ್ಬ ಅಂಗಡಿ ಮಾಲೀಕರು ಕೂಡ ಆಹಾರ ಇಲಾಖೆ ಅಧಿಕಾರಿಗಳು ಲಂಚ ಪಡೆದಿದ್ದಾರೆ ಎಂದು ಇದುವರೆಗೂ ಆರೋಪಿಸಿಲ್ಲ. ಆದರೆ ಇತ್ತೀಚೆಗೆ ನಮ್ಮ ಜಿಲ್ಲೆಯವರೇ ಅಲ್ಲದ ವ್ಯಕ್ತಿಯೊಬ್ಬರು ಇಂತಹ ಆರೋಪ ಮಾಡಿರುವುದು ಸರಿಯಲ್ಲ ಎಂದರು. ಮೊದಲಿಗೆ ಅವರದು ಸಂಘವೇ ಇಲ್ಲ ಎಂದರು. ನ್ಯಾಯಬೆಲೆ ಅಂಗಡಿಗಳಲ್ಲಿ ಅಳತೆ ಸರಿ ಇಲ್ಲದಿದ್ದರೆ ಅಥವಾ ತೂಕದಲ್ಲಿ ಮೋಸ ಮಾಡಿದರೆ ಕ್ರಮ ಕೈಗೊಳ್ಳಲಿ, ತಪ್ಪು ಮಾಡಿದವರಿಗೆ ಶಿಕ್ಷೆಯಾಗಲಿ, ತಪ್ಪು ಮಾಡಿದವರನ್ನು ನಮ್ಮ ಸಂಘ ಎಂದಿಗೂ ರಕ್ಷಿಸುವುದಿಲ್ಲ.

ಆದರೆ ಸುಖಾ ಸುಮ್ಮನೇ ಅಧಿಕಾರಿಗಳ ವಿರುದ್ಧ ಲಂಚ ಆರೋಪ ಹೊರಿಸುವುದು ಸರಿಯಲ್ಲ ಎಂದರು.

ಹಣ ಪಡೆದ ಅಧಿಕಾರಿಗಳ ವಿರುದ್ಧ ಕ್ರಮ ಆಗಲಿ, ಗ್ಯಾರಂಟಿ ಸಮಿತಿ ಸದಸ್ಯರಿಗೆ ಸೂಕ್ತ ಪುರಾವೆ ಇದ್ದರೆ ದೂರು ಕೊಡಬಹುದು ಎಂದರು. ಅಳತೆಯಲ್ಲಿ ಮೋಸ ಮಾಡಿದ ಆರೋಪದಡಿ ಈಗಾಗಲೇ ಸಾವಂತನಹಳ್ಳಿ ನ್ಯಾಯಬೆಲೆ ಅಂಗಡಿಯನ್ನು ಅಮಾನತು ಮಾಡಲಾಗಿದೆ ಎಂದು ತಿಳಿಸಿದರು.

ಪಡಿತರ ವಿತರಕರ ಸಂಘದ ನಾಗರಾಜ್, ಮಂಜೇಗೌಡ, ರವಿ, ಸಿದ್ದೇಶ್ ಕೆಲವತ್ತಿ, ಜೈಕುಮಾರ್ ಉಡುವಾರೆ ಇದ್ದರು.

## ಭೀಮಕೊರೆಗಾಂವ್ ವಿಜಯೋತ್ಸವ ಯಶಸ್ಸಿಗೆ ದಲಿತ ಸಾಹಿತ್ಯ ಪರಿಷತ್ ಕರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನದಲ್ಲಿ ಇದೇ ತಿಂಗಳ 20ನೇ ತಾರಿಖಿನಂದು ನಡೆಯುತ್ತಿರುವ 208ನೇ ಭೀಮಕೊರೆಗಾಂವ್ ವಿಜಯೋತ್ಸವವು ಸಿಪಾಯಿ ದಂಗೆಗಿಂತ ಹಿಂದೆ ನಡೆದಂತಹ ಐತಿಹಾಸಿಕ ಯುದ್ಧವಾಗಿದ್ದು ಇದರಲ್ಲಿ ಸುಮಾರು 22 ಜನ ಅಸ್ಪ್ರಶ್ಯರು ವೀರಮರಣ ಹೊಂದಿದ್ದು ಅವರೆಲ್ಲರನ್ನು ದಲಿತ ಸಾಹಿತ್ಯ ಪರಿಷತ್ ಸ್ಮರಿಸುತ್ತದೆ.

ಯುದ್ಧದಲ್ಲಿ ವೀರ ಮರಣ ಹೊಂದಿದ ಎಲ್ಲರಿಗೂ ಗೌರವ ಸಮರ್ಪಿಸುವುದರ ಮೂಲಕ ಸ್ವಾಭಿಮಾನದ ಸಂಕೇತವಾಗಿ ಪ್ರಪ್ರಥಮ ಬಾರಿಗೆ ಹಾಸನದಲ್ಲಿ ಹೆಚ್. ಕೆ.ಸಂದೇಶ ರವರು ಹೋರಾಟಗಾರರು ಇವರನೇತ್ರತ್ವದಲ್ಲಿ ಆಯೋಜನೆಗೊಂಡಿರುವ ವಿಜಯೋತ್ಸವಕ್ಕೆ ಮುಖ್ಯ ಕೇಂದ್ರಬಿಂದುವಾಗಿ ಆಗಮಿಸುತ್ತಿರುವ ಭೀಮರಾವ್ ಅಂಬೇಡ್ಕರ್ ಇವರು ಡಾ.ಬಾಬಸಾಹೇಬ್ ಅಂಬೇಡ್ಕರರ ಮೊಮ್ಮಗನಾಗಿ ಸಾರ್ವಜನಿಕರ ಸಾಕ್ಷಿ ಪ್ರಜ್ಞೆಯನ್ನು ಜಾಗೃತಗೊಳಿಸುವಂತಹ ಮಹತ್ವಪೂರ್ಣ ಆಚರಣೆಯಾಗಿದೆ.

ಈ ಕಾರ್ಯಕ್ರಮವನ್ನು ಹಾಸನ ಜಿಲ್ಲಾ ದಲಿತ ಸಾಹಿತ್ಯ ಪರಿಷತ್ತು ಮತ್ತು ತಾಲೂಕು ದಲಿತ ಸಾಹಿತ್ಯ ಪರಿಷತ್ತಿನ ಗೌರವಾಧ್ಯಕ್ಷರುಗಳಾದ ಗುರುಮೂರ್ತಿ.ಕೆ.ಬಿ. ಕ್ರಷ್ಣದಾಸ್. ಡಾ.ಕ್ರಷ್ಣಪ್ಪ ಐಚನಹಳ್ಳಿ. ನಂಜುಂಡಯ್ಯ. ಡಾ.ಕೆ.ಸಿ.ಸೋಮಲತ ಅಧ್ಯಕ್ಷರು ಮತ್ತು ಪದಾಧಿಕಾರಿಗಳಾದ ಡಾ.ವಸಂತಕುಮಾರ, ಡಾ. ದೇವರಾಜು, ಹಾನಗಲ್ಲು ದೇವರಾಜ್. ಎಂ.ಕೆ.ಕ್ರಷ್ಣಯ್ಯ. ರಾಧಾಕೃಷ್ಣ, ಮಧು.ಕೆ.ದೇವರಾಜು ಶಾಂತಮ್ಮ,ವಿರೇಂದ್ರ, ರಾಜೇಶ್, ತೇಜಸ್, ದರ್ಶನ್, ಪ್ರವೀಣ್ ಟಿ.ಸಿ. ಹಾಗೂ ನಂಜುಂಡಯ್ಯ, ಮತ್ತು ಡಿ.ಕೆ.ವಸಂತಯ್ಯ ಇವರೆಲ್ಲರೂ ವಿಜಯೋತ್ಸವದಲ್ಲಿ ಪಾಲ್ಗೊಂಡು ತಮ್ಮ ನೈತಿಕ ಬೆಂಬಲ ನೀಡುವ ಮೂಲಕ ಕಾರ್ಯಕ್ರಮಕ್ಕೆ ಶುಭಹಾರೈಸಿದ್ದಾರೆ.




## ಜಯರಾಮ್ ಮಹಾಮಂಡಳದ ನಿರ್ದೇಶಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಕರ್ನಾಟಕ ರಾಜ್ಯ ಸಹಕಾರ ಸಕ್ಕರೆ ಕಾರ್ಖಾನೆಗಳ ಮಹಾಮಂಡಳಿ ನಿಯಮಿತದ ಆಡಳಿತ ಮಂಡಳಿಯ ನಿರ್ದೇಶಕ ಸ್ಥಾನಕ್ಕೆ ಸದಸ್ಯ ಸಹಕಾರಿ ಸಕ್ಕರೆ ಕಾರ್ಖಾನೆಗಳ ಕ್ಷೇತ್ರದಿಂದ ತಾಲ್ಲೂಕಿನ ತೋಟಿ ಗ್ರಾಮದ ಕೆ.ಎಂ.ಜಯರಾಮ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ಇತ್ತೀಚೆಗೆ ನಡೆದ ಚುನಾವಣೆ ಪ್ರಕ್ರಿಯೆಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇವರು ಕಳೆದ 20 ವರ್ಷಗಳಿಂದ ಸಹಕಾರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದು ಕ್ಷೇತ್ರ ವ್ಯಾಪ್ತಿಯ ರೈತರ ಏಳಿಗೆಗೆ ಶ್ರಮಿಸಿದ್ದಾರೆ. ಅವಿರೋಧವಾಗಿ ಆಯ್ಕೆಯಾದ ಕೆ.ಎಂ.ಜಯರಾಮ್ ಅವರನ್ನು ಶಾಸಕರಾದ ಸಿ.ಎನ್.ಬಾಲಕೃಷ್ಣ ಅವರು ಹಾಗೂ ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿ ವತಿಯಿಂದ ಅಭಿನಂದಿಸಲಾಯಿತು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248